ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 04 ಇಜಿಯು 2018

ನಿರ್ದೇಶಕರವರ ಕಛೇರಿ,
ಅರಮನೆ ರಸ್ತೆ,
ಬೆಂಗಳೂರು-560 001.
ದಿನಾಂಕ:17-11-2018.

## ಸುತ್ತೋಲೆ

ವಿಷಯ: ಕನ್ನಡದಲ್ಲಿ ಅಂತರ್ಜಾಲ ತಾಣವನ್ನು ಸೃಜಿಸುವ ಬಗ್ಗೆ.
ಉಲ್ಲೇಖ: 1.ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರ ಪತ್ರ ಸಂಖ್ಯೆ ಕಅಪ್ರಾ/ಅ/1007/2018 ದಿನಾಂಕ: 05/11/2018

*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರರ ಪತ್ರದಲ್ಲಿ ತಿಳಿಸಿರುವಂತೆ ತಾಂತ್ರಿಕ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಸರ್ಕಾರಿ ಇಂಜಿನೀಯರಿಂಗ್ ಕಾಲೇಜುಗಳ ಅಧಿಕೃತ ಅಂತರ್ಜಾಲತಾಣಗಳು ಕನ್ನಡದಲ್ಲಿ ಇರಬೇಕೆಂದು ತಿಳಿಸಿರುತ್ತಾರೆ. ಆದ್ದರಿಂದ ತಕ್ಷಣವೇ ಎಲ್ಲಾ ಪ್ರಾಂಶುಪಾಲರು ತಮ್ಮ ತಮ್ಮ ಸಂಸ್ಥೆಯ ಅಂತರ್ಜಾಲ ತಾಣಗಳನ್ನು ಹೊಸದಾಗಿ ಸೃಜಿಸಲು ಕ್ರಮ ಕೈಗೊಂಡು, ಮುಖಪುಟ ಹಾಗೂ ಒಳ ಮಾಹಿತಿಗಳನ್ನು ಕನ್ನಡದಲ್ಲಿಯೇ ಸೃಜಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ. ದಿನಾಂಕ 27-11-2018 ರೊಳಗೆ ಅಂತರ್ಜಾಲ ತಾಣಗಳನ್ನು ಸೃಜಿಸಿ, ಹೊಸ್ಟ್ ಮಾಡಿ, ಹೋಸ್ಟ್ ಮಾಡಿರುವ ಬಗ್ಗೆ ನಿರ್ದೇಶನಾಲಯಕ್ಕೆ ವರದಿ ಸಲ್ಲಿಸಬೇಕೆಂದು ಸೂಚಿಸಲಾಗಿದೆ.

ನಿರ್ದೇಶಕರು
17/11/18 17/11/18

ಇವರಿಗೆ,

1. ತಾಂತ್ರಿಕ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ನಿರ್ದೇಶಕರ ಆಪ್ತ ಶಾಖೆಗೆ ಮಾಹಿತಿಗಾಗಿ.